ಭಾನುವಾರ 16.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 101
Digital Varthe Kannada Daily
Volume 01 - Issue 101
Sunday 16.11.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಹಲ್ಲೆಗೊಳಗಾಗಿದ್ದ ಸಮಾಜ ಕಲ್ಯಾಣ ಇಲಾಖೆ ಮಹಿಳಾ ಅಧಿಕಾರಿ ಸಾವು



**ಯಾದಗಿರಿ:** ತಾಲೂಕು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ (Social Welfare Officer) ಅಂಜಲಿ (35) ಮೇಲೆ ನ. 12 ರಂದು ಮಾರಕಾಸ್ತ್ರಗಳಿಂದ ಹಲ್ಲೆ ನಡೆದಿತ್ತು. ಘಟನೆಯಲ್ಲಿ ಗಂಭೀರ ಗಾಯಗೊಂಡಿದ್ದಅವರು ಕಲಬುರಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಇದೀಗ ಹೈದರಾಬಾದಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೆ ಅಂಜಲಿ ಸಾವನ್ನಪ್ಪಿದ್ದಾರೆ.

ಅಧಿಕಾರಿಯ ಹತ್ಯೆಗೈದ ದುಷ್ಕರ್ಮಿಗಳು ವಶಕ್ಕೆ

ಅಧಿಕಾರಿಯ ಮೇಲೆ ಹಳೆಯ ದ್ವೇಷ ಹೊಂದಿದ್ದ ದುಷ್ಕರ್ಮಿಗಳು ಕೊಡಲಿ ಸೇರಿದಂತೆ ಇನ್ನಿತರ ಮಾರಾಕಾಸ್ತ್ರಗಳಿಂದ ದಾಳಿ ಮಾಡಿದ್ದು, ಕೊಲೆ ಮಾಡುವ ಉದ್ದೇಶದಿಂದಲೇ ಪ್ಲಾನ್ ಮಾಡಿ ದಾಳಿ ಮಾಡಿದ್ದರೆಂದು ಶಂಕಿಸಲಾಗಿತ್ತು. ಈ ಕೃತ್ಯಕ್ಕೆ ಸಂಬಂಧಿಸಿದ ಯಲ್ಲಪ್ಪ, ಕಾಶಿನಾಥ, ದತ್ತಾತ್ರೇಯ ಮತ್ತು ಜಗದೀಶ್ ಎಂಬ ನಾಲ್ವರು ಹಂತಕರನ್ನು ಯಾದಗಿರಿ ಪೊಲೀಸರು ವಿಜಯಪುರದಲ್ಲಿ ಬಂಧಿಸಿದ್ದಾರೆ.

ಸ್ವಿಫ್ಟ್ ಕಾರಿನಲ್ಲಿ ಬಂದು ಕೊಲೆ ಮಾಡಿ ಮಹಾರಾಷ್ಟ್ರದ ಕಡೆಗೆ ಪರಾರಿಯಾಗುತ್ತಿದ್ದ ವೇಳೆ ಇವರನ್ನು ಸೆರೆಹಿಡಿಯಲಾಗಿದೆ. ಶಹಾಬಾದ್ ಮೂಲದ ವಿಜಯ್ ಹಾಗೂ ಶಂಕರ್ ಅವರು ಅಂಜಲಿ ಕೊಲೆಗೆ ಸುಪಾರಿ ನೀಡಿದ್ದಾರೆಂದು ಆರೋಪಿಗಳು ತನಿಖೆಯ ವೇಳೆ ಒಪ್ಪಿಕೊಂಡಿದ್ದಾರೆ. 4 ವರ್ಷಗಳ ಹಿಂದೆ ಅಂಜಲಿಯ ಪತಿ ಗಿರೀಶ್‌ರನ್ನೂ ಸಹ ದುಷ್ಕರ್ಮಿಗಳಾದ ವಿಜಯ್ ಮತ್ತು ಶಂಕರ್ ಭೀಕರವಾಗಿ ಹತ್ಯೆಗೈದಿದ್ದರು. ಇದೇ ದ್ವೇಷದಿಂದ ಅಧಿಕಾರಿ ಕಳೆದ ಸೆಪ್ಟೆಂಬರ್‌ನಲ್ಲಿ ಶಂಕರ್ ಮೇಲೆ ಹಲ್ಲೆ ನಡೆಸಿರಬಹುದೆಂಬ ಶಂಕೆಯಿಂದ ಪ್ರತೀಕಾರವಾಗಿ ಈ ಕೊಲೆ ಯೋಜನೆ ರೂಪಿಸಲಾಗಿದೆ ಎಂದು ಹೇಳಲಾಗಿದೆ. ಸುಪಾರಿ ನೀಡಿದ ಪ್ರಮುಖ ಆರೋಪಿಗಳಾದ ವಿಜಯ್ ಮತ್ತು ಶಂಕರ್ ಇದೀಗ ಪರಾರಿಯಾಗಿದ್ದು, ಅವರ ಪತ್ತೆಗೆ ಪೊಲೀಸರು ಶೋಧ ನಡೆಸುತ್ತಿದ್ದಾರೆ.

**ಹೈದರಾಬಾದ್‌ನ ಖಾಸಗಿ ಆಸ್ಪತ್ರೆಯಲ್ಲಿ ಅಧಿಕಾರಿ ಸಾವು**

ಸಮಾಜ ಕಲ್ಯಾಣ ಇಲಾಖೆಯಲ್ಲಿ ದ್ವಿತೀಯ ದರ್ಜೆ ಸಹಾಯಕಿ (SDA)ಯಾಗಿ ಕೆಲಸ ಮಾಡುತ್ತಿದ್ದ ಅಂಜಲಿ,ಯಾದಗಿರಿ ನಗರದ ಗ್ರೀನ್ ಸಿಟಿ ಬಡಾವಣೆಯಲ್ಲಿರುವ ಸಮಾಜ ಕಲ್ಯಾಣ ಕಚೇರಿಗೆ ಹೋಗುತ್ತಿರುವಾಗ ಕಾರನ್ನು ಅಡ್ಡಗಟ್ಟಿದ ದುಷ್ಕರ್ಮಿಗಳು, ಅವರ ಕಾರಿನ ಗಾಜನ್ನು ಒಡೆದು, ಅವರ ಮೇಲೆ ಹಲ್ಲೆ ನಡೆಸಿ ಪರಾರಿಯಾಗಿದ್ದರು. ಈ ಹಿನ್ನೆಲೆ ಯಾದಗಿರಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಹಲ್ಲೆ ನಡೆದ ನಂತರ ಕಾರಿನಲ್ಲಿಯೇ ರಕ್ತದ ಮಡುವಿನಲ್ಲಿದ್ದ ಅಧಿಕಾರಿಯನ್ನು ಅವರ ಕಾರು ಚಾಲಕ ಕೂಡಲೇ ಯಾದಗಿರಿ ಜಿಲ್ಲಾಸ್ಪತ್ರೆಗೆ ದಾಖಲು ಮಾಡಿದ್ದರು. ಅಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿದ ನಂತರ ಅವರನ್ನು ಕಲಬುರಗಿಯ ಖಾಸಗಿ ಆಸ್ಪತ್ರೆಗೆ ರವಾನೆ ಮಾಡಲಾಗಿತ್ತು. ತದನಂತರ ಅಂಜಲಿಯನ್ನು ಹೈದರಾಬಾದ್‌ನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಇದೀಗ ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆದಿದ್ದಾರೆ. ಪತಿ ಗಿರೀಶ್ ಕೊಲೆಯ ಬಳಿಕ ಎಸ್‌ಸಿ, ಎಸ್‌ಟಿ ದೌರ್ಜನ್ಯ ಕಾಯ್ದೆಯಡಿ ಅಂಜಲಿ ನೌಕರಿಗೆ ಸೇರಿದ್ದರೆಂದು ತಿಳಿದುಬಂದಿದೆ.

## ತಣ್ಣಗಿದ್ದ ತುಮಕೂರಲ್ಲಿ ಶುರುವಾಯ್ತಾ ಗ್ಯಾಂಗ್‌ವಾರ್



**ತುಮಕೂರು:** ಹಳೆ ದ್ವೇಷಕ್ಕೆ ನಡೆದ ಗಲಾಟೆಯಲ್ಲಿ ಓರ್ವ ಕೊಲೆಯಾಗಿ, ಮತ್ತೋರ್ವ ಗಂಭೀರ ವಾಗಿ ಗಾಯಗೊಂಡಿರುವ ಘಟನೆ ತುಮಕೂರಿನ ಜಯನಗರ ಠಾಣಾ ವ್ಯಾಪ್ತಿಯ ಮಂಜುನಾಥ ನಗರದಲ್ಲನಡೆದಿದೆ. ಲಾಂಗು-ಮಚ್ಚುಗಳಿಂದ ನಡೆದ ಫೈಟ್‌ನಲ್ಲಿ ಕ್ಯಾತ್ಸಂದ್ರದ ನಿವಾಸಿ ಅಭಿಷೇಕ್ ಎಂಬಾತ ಮೃತಪಟ್ಟಿದ್ದು, ಎನ್‌ಇಪಿಎಸ್ ಠಾಣೆಯ ರೌಡಿಶೀಟರ್ ಮನೋಜ್ ಗಂಭೀರವಾಗಿ ಗಾಯಗೊಂಡಿದ್ದಾನೆ.

**ಘಟನೆ ಬಗ್ಗೆ ಇನ್ನೂ ಸಿಕ್ಕಿಲ್ಲ ಸ್ಪಷ್ಟತೆ**

ಕಳೆದ ಕೆಲ ದಿನಗಳ ಹಿಂದೆ ಅಭಿಷೇಕ್ ಮತ್ತು ಮನೋಜ್ ಗುಂಪಿನ ಹುಡುಗರು ಬಾರ್‌ನಲ್ಲಿ ಕಿರಿಕ್ ಮಾಡಿಕೊಂಡಿದ್ದರು. ಇದೇ ವಿಚಾರವಾಗಿ ಕಳೆದ 3ಂಗಳು ಒಂದೆರಡು ಬಾರಿ ರಾಜಿ ಸಂಧಾನದ ಯತ್ನವೂ ನಡೆದಿತ್ತು. ನಿನ್ನೆ (ನ.13) ರಾತ್ರಿಯೂ ಇದೇ ವಿಚಾರವಾಗಿ ಮಾತುಕತೆ ನಡೆದಿದ್ದು, ಈ ವೇಳೆ ಪರಿಸ್ಥಿತಿ ವಿಕೋಪಕ್ಕೆ ಹೋಗಿದೆ. ಅಭಿಷೇಕ್ ತನ್ನ ಇಬ್ಬರು ಗೆಳೆಯರ ಜೊತೆ ಬಂದು ಮನೋಜ್ ಮೇಲೆ ಮೊದಲು ಅಟ್ಯಾಕ್ ಮಾಡಿದ್ದ. ಇದರಿಂದ ರೊಚ್ಚಿಗೆದ್ದ ಮನೋಜ್ ತನ್ನ ಜೊತೆಗಾರರನ್ನು ಕರೆಸಿ ಅಭಿಷೇಕ್ ಮೇಲೆ ದಾಳಿ ಮಾಡಿ ಹತ್ಯೆಮಾಡಿದ್ದಾನೆ. ಮತ್ತೊಂದು ಗುಂಪಿನ ದಾಳಿಯಿಂದ ಮನೋಜ್‌ಗೂ ಗಂಭೀರ ಗಾಯವಾಗಿ ಎನ್ನಲಾಗಿದೆ. ಆದರೆ ನಿಜಕ್ಕೂ ಅಲ್ಲಾಗಿದ್ದೇನು ಎಂಬುದು ಸದ್ಯಕ್ಕೆ ಗೊಂದಲದ ಗೂಡಾಗಿದ್ದು, ಈ ಬಗ್ಗೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಅಭಿಷೇಕ್ ಹತ್ಯೆ ಸಂಬಂಧ ಕೊಲೆ ಪ್ರಕರಣ ಹಾಗೂ ರೌಡಿಶೀಟರ್ ಮನೋಜ್ ಮೇಲಿನ ಹಲ್ಲೆ ಸಂಬಂಧ ಕೊಲೆಯತ್ನ ಪ್ರಕರಣ ದಾಖಲಾಗಿದೆ.

**ತುಮಕೂರಲ್ಲಿ ಶುರುವಾಯ್ತಾ ಗ್ಯಾಂಗ್ ವಾರ್?**

ಘಟನೆ ಬೆನ್ನಲ್ಲೇ ಇಷ್ಟು ದಿನ ತಣ್ಣಗಿದ್ದ ತುಮಕೂರಿನಲ್ಲಿ ಮತ್ತೆ ಗ್ಯಾಂಗ್‌ವಾರ್ ಆರಂಭವಾಯ್ತಾ ಎನ್ನುವ ಅನುಮಾನ ಶುರುವಾಗಿದೆ. ಕ್ಷುಲ್ಲಕ ವಿಚಾರಕ್ಕೆ ನಡೆದ ಜಗಳದಲ್ಲಿ ಮಾರಮಾರಿಯೇ ನಡೆದಿರೋದು ಸ್ಥಳೀಯರನ್ನು ಬೆಚ್ಚಿಬೀಳಿಸಿದೆ. ಲಾಂಗು-ಮಚ್ಚುಗಳಿಂದ ಅಟ್ಟಹಾಸ ನಡೆದು ರಕ್ತ ಹರಿದಿದ್ದು, ರೌಡಿಗಳು ಫೀಲ್ಡ್‌ನಲ್ಲಿ ಮತ್ತೆ ಆ್ಯಕ್ಟೀವ್ ಆಗಿದ್ದಾರಾ ಎನ್ನುವ ಪ್ರಶ್ನೆ ಉದ್ಭವಿಸಿದೆ.

## ಹಳೆಯ ದ್ವೇಷಕ್ಕೆ ಇಡೀ ಕುಟುಂಬಕ್ಕೆ ವಿಷ ಹಾಕಿದ ಪಾಪಿರೆಡ್ಡಿ



**ಚಿಕ್ಕಬಳ್ಳಾಪುರ:** ಜಿಲ್ಲೆಯ ಬಾಗೇಪಲ್ಲಿ(ಭಾಗ್ಯನಗರ) ತಾಲೂಕಿನ ದೇವಿರೆಡ್ಡಿಪಲ್ಲಿಯಲ್ಲಿ ಒಂದೇ ಕುಟುಂಬದ 8 ಜನ ವಿಷ ಸೇವಿಸಿ ಅಸ್ವಸ್ಥರಾಗಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ಕುಟುಂಬದ ಮೂವರ ಸ್ಥಿತಿ ಚಿಂತಾಜನಕವಾಗಿದೆ. ಹಳೆಯ ದ್ವೇಷದ ಹಿನ್ನೆಲೆಯಲ್ಲಿ ಈ ಕೃತ್ಯ ನಡೆದಿದೆಯೆಂದು ಕೇಳಿಬಂದಿದ್ದು, ಬಾಗೇಪಲ್ಲಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಸಾಂಬಾರಿಗೆ ವಿಷ ಬೆರೆಸಿದ್ದ ಪಾಪಿ**

ದೇವಿರೆಡ್ಡಿ ಪಲ್ಲಿಯ ಮದ್ದರೆಡ್ಡಿ ಮತ್ತು ಪಾಪಿರೆಡ್ಡಿ ಎಂಬುವವರು ಅಕ್ಕಪಕ್ಕದ ಮನೆಯವರಾಗಿದ್ದು, ಎರಡು ವರ್ಷಗಳ ಹಿಂದೆ ಇಬ್ಬರ ಮನೆಗಳ ನಡುವಿನ ಮೂರಡಿ ಖಾಲಿ ಜಾಗದ ಸಲುವಾಗಿ ಜಗಳವಾಗಿತ್ತು. ಇದೇ ದ್ವೇಷದ ಹಿನ್ನೆಲೆಯಲ್ಲಿ ಚೌಡರೆಡ್ಡಿ ಎಂಬಾತನಿಗೆ ಸುಪಾರಿ ಕೊಟ್ಟ ಪಾಪಿರೆಡ್ಡಿ ಕುಟುಂಬದವರ ಆಹಾರದಲ್ಲಿ ವಿಷ ಬೆರೆಸುವಂತೆ ಹೇಳಿದ್ದ. ಅಂತೆಯೇ ಮದ್ದರೆಡ್ಡಿಯ ಅಡುಗೆ ಮನೆಗೆ ನೀರು ಕುಡಿಯುವ ನೆಪದಲ್ಲಿ ತೆರಳಿದ್ದ ಚೌಡರೆಡ್ಡಿ, ಸಾಂಬಾರಿಗೆ ವಿಷದ ಪೌಡರ್ ಬರೆಸಿದ್ದ.

**ವಿಷ ಸೇವಿಸಿದ ಮೂವರ ಸ್ಥಿತಿ ಚಿಂತಾಜನಕ**

ಇದನ್ನರಿಯದ ಕುಟುಂಬಸ್ಥರು ಎಂದಿನಂತೆ ಊಟ ಮಾಡಿದ್ದು, ಮನೆ ಯಜಮಾನಿ ಮದ್ದಕ್ಕ ಹಾಗೂ ಇವರ ಇಬ್ಬರು ಮಕ್ಕಳಾದ ಮದ್ದರೆಡ್ಡಿ ಹಾಗೂ ಮಂಜುನಾಥ್ ಸೇರಿದಂತೆ ಮದ್ದರೆಡ್ಡಿ ಪತ್ನಿ ಭಾಗ್ಯಮ್ಮ, ಮಗಳು ಮಣಿ, ಮಂಜುನಾಥ್ ಪತ್ನಿ ಈಶ್ವರಮ್ಮ, ಮಂಜುನಾಥ್ ನ ಮಗ ಸುಬ್ರಮಣಿ, ಹಾಗೂ ಸಂಬಂಧಿ ಬಾಲಕಿ ಭಾನುಶ್ರೀ ಈ ಎಂಟೂ ಜನ ಅಸ್ವಸ್ಥರಾಗಿದ್ದಾರೆ.

ಈ 8 ಜನರನ್ನು ವಿವಿಧ ಆಸ್ಪತ್ರೆ ಗಳಿಗೆ ದಾಖಲಿಲಾಗಿದ್ದು, ಸದ್ಯಕ್ಕೆ ಮಂಜುನಾಥ್ ಹಾಗೂ ಮದ್ದರೆಡ್ಡಿ ಸೇರಿದಂತೆ ಸುಬ್ರಮಣಿ ಸ್ಥಿತಿ ಚಿಂತಾಜನಕವಾಗಿದ್ದು, ಐಸಿಯುನಲ್ಲಿರಿಸಲಾಗಿದೆ. ಉಳಿದ 5 ಮಂದಿ ಪ್ರಾಣಾಪಾಯದಿಂದ ಪಾರಾಗಿದ್ದರೂ ದೇಹದೊಳಗೆ ವಿಷ ಸೇರಿರುವುದರಿಂದ ಯಾವಾಗ ಏನಾಗುತ್ತದೆಂದು ಹೇಳಲಾಗುವುದಿಲ್ಲ ಎಂದು ವೈದ್ಯರು ಹೇಳಿದ್ದಾರೆ. ಈ ಹಿನ್ನೆಲೆ ಎಸ್ಪಿ ಕುಶಲ್ ಚೌಕ್ಸೆ ಸೇರಿದಂತೆ ಬಾಗೇಪಲ್ಲಿ ಪೊಲೀಸರು ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣದ ಪ್ರಮುಖ ಆರೋಪಿಗಳಾದ ಪಾಪಿರೆಡ್ಡಿ ಹಾಗೂ ಚೌಡರೆಡ್ಡಿಯನ್ನು ಬಂಧಿಸಲಾಗಿದೆ.

## ಬೆಂಗಳೂರಿಗೆ ಕಾಲಿಟ್ಟಿದ್ದಾಳೆ ನಕಲಿ ನಂದಿನಿ - 1.5 ಕೋಟಿ ಮೌಲ್ಯದ 8 ಸಾವಿರ ಲೀಟರ್ ತುಪ್ಪ ಸೀಜ್



**ಬೆಂಗಳೂರು:** ನಗರದಲ್ಲಿ ನಕಲಿ ನಂದಿನಿ (Nandini) ತುಪ್ಪ ಮಾರಾಟ ಮಾಡುತ್ತಿದ್ದ ಜಾಲ ಪತ್ತೆಯಾಗಿದ್ದು, ಪೊಲೀಸರು 1.5 ಕೋಟಿ ರೂ. ಮೌಲ್ಯದ 8 ಸಾವಿರ ಲೀಟರ್ ತುಪ್ಪವನ್ನು ಸೀಜ್ ಮಾಡಿದ್ದಾರೆ.

ಈ ಸಂಬಂಧ ಕೆಎಂಎಫ್ (KMF) ಡಿಸ್ಟ್ರಿಬ್ಯೂಟರ್ ಮಹೇಂದ್ರ, ಪುತ್ರ ದೀಪಕ್, ಸಪ್ಲೈರ್‌ಗಳಾದ ಮುನಿರಾಜು ಹಾಗೂ ಅಭಿ ಅರಸು ಎಂಬ ನಾಲ್ವರ ಗ್ಯಾಂಗ್‌ನ್ನು ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಗಳು ಸೇರಿ ಕೊಂಡು ಬೆಂಗಳೂರಿನಲ್ಲಿದ್ದ ನಂದಿನಿ ಪಾರ್ಲರ್‌ಗಳಿಗೆ ನಕಲಿ ತುಪ್ಪವನ್ನು ಸರಬರಾಜು ಮಾಡುತ್ತಿದ್ದರು. ಹೊರ ರಾಜ್ಯದಲ್ಲಿ ಕಲಬೆರಕೆ ತುಪ್ಪವನ್ನು ತಯಾರಿಸಿ, ಪ್ಯಾಕೆಟ್ ಹಾಗೂ ಪ್ಲ್ಯಾಸ್ಟಿಕ್ ಬಾಟಲ್‌ನಲ್ಲಿ ಸಪ್ಲೈ ಮಾಡುತ್ತಿದ್ದರು.

ಓರ್ವ ತಯಾರಿಸಿದ ತುಪ್ಪವನ್ನು ತಮಿಳುನಾಡಿನಿಂದ ಸಪ್ಲೈ ಮಾಡಿದರೆ, ಇನ್ನೋರ್ವ ಅದನ್ನು ಬೆಂಗಳೂರಿಗೆ ಕಳುಹಿಸುತ್ತಿದ್ದ. ಈ ಜಾಲದಲ್ಲಿ ಕೆಎಂಎಫ್ ಡಿಸ್ಟ್ರಿಬ್ಯೂಟರ್ ಹಾಗೂ ಅವರ ಪುತ್ರ ಕೂಡ ಭಾಗಿಯಾಗಿರುವುದು ತಿಳಿದುಬಂದಿದೆ. ಸದ್ಯ ಪೊಲೀಸರು ನಾಲ್ವರ ಮುಖವಾಡ ಕಳಚಿ ಅರೆಸ್ಟ್ ಮಾಡಿದ್ದು, ಬರೋಬ್ಬರಿ 1.50 ಕೋಟಿ ರೂ. ಮೌಲ್ಯದ 8 ಸಾವಿರ ಲೀಟರ್ ನಕಲಿ ತುಪ್ಪವನ್ನು ಜಪ್ತಿ ಮಾಡಿದ್ದಾರೆ.

## ಟೆರರ್ ಡಾಕ್ಟರ್ಸ್‌ನಿಂದ ಸಂಗ್ರಹಿಸಿದ್ದ ಸ್ಫೋಟಕಗಳು ಬ್ಲಾಸ್ಟ್



**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ರಾಜಧಾನಿ ಶ್ರೀನಗರದ ನೌಗಾಮ್ ಪೊಲೀಸ್ ಠಾಣೆ ಆವರಣದಲ್ಲಿ ಶುಕ್ರವಾರ ತಡರಾತ್ರಿ ಸಂಭವಿಸಿದ ಭೀಕರ ಸ್ಫೋಟದಲ್ಲಿ 8 ಪೊಲೀಸ್ ಅಧಿಕಾರಿಗಳು ಸಾವನ್ನಪ್ಪಿದ್ದಾರೆ ಮತ್ತು 27ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಗಾಯಗೊಂಡವರಲ್ಲಿ ಹೆಚ್ಚಿನವರು ಪೊಲೀಸ್ ಮತ್ತು ವಿಧಿವಿಜ್ಞಾನ ತಂಡದ ಸದಸ್ಯರೆಂದು ತಿಳಿದುಬಂದಿದೆ. ನವದೆಹಲಿಯ ಕೆಂಪು ಕೋಟೆ ಬಳಿ ಸಂಭವಿಸಿದ ಕಾರ್ ಬಾಂಬ್ ಸ್ಫೋಟದ ನಂತರ ಕೆಲವೇ ದಿನಗಳಲ್ಲಿ ಸಂಭವಿಸಿದ ಈ ಘಟನೆ ಸಂಭವಿಸಿದೆ.

ಈ ಸ್ಫೋಟಕ್ಕೂ ದೆಹಲಿ ಸ್ಫೋಟಕ್ಕೂ ನೇರ ಸಂಬಂಧ ಇದೆ ಎಂದು ತನಿಖಾ ಮೂಲಗಳು ತಿಳಿಸಿವೆ. ಹರಿಯಾಣದ ಫರಿದಾಬಾದ್‌ನಲ್ಲಿ ಬಂಧಿತ ಉಗ್ರ ವೈದ್ಯ ಮುಜಮ್ಮಿಲ್ ಗನ್ನೈನ ಬಾಡಿಗೆ ಮನೆಯಿಂದ ವಶಪಡಿಸಿಕೊಂಡ 360 ಕಿಲೋಗ್ರಾಂ ಸ್ಫೋಟಕ ವಸ್ತುಗಳ ಪೈಕಿ ಒಂದು ಭಾಗವನ್ನು ಮಾದರಿ ಪರೀಕ್ಷೆಗಾಗಿ ಶ್ರೀನಗರದ ನೌಗಾಮ್ ಪೊಲೀಸ್ ಠಾಣೆಯಲ್ಲಿ ಸಂಗ್ರಹಿಸಿಡಲಾಗಿತ್ತು. ಈ ಸಂಗ್ರಹಿಸಿದ ಸ್ಫೋಟಕ ವಸ್ತುಗಳಿಂದಲೇ ಆಕಸ್ಮಿಕವಾಗಿ ಸ್ಫೋಟ ಸಂಭವಿಸಿರಬಹುದು ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ಸ್ಫೋಟದ ತೀವ್ರತೆ ಬಹಳ ಭಯಾನಕವಾಗಿತ್ತು. ಸ್ಫೋಟದ ನಂತರ ಪೊಲೀಸ್ ಠಾಣೆಯಿಂದ ಭಾರಿ ಪ್ರಮಾಣದ ಹೊಗೆ ಮತ್ತು ಬೆಂಕಿ ಹೊರಚಿಮ್ಮುವ ದೃಶ್ಯ ಸ್ಥಳೀಯ ಸಿಸಿಟಿವಿ ಕ್ಯಾಮೆರಾಗಳಲ್ಲಿ ಸೆರೆಯಾಗಿವೆ. ಸ್ಫೋಟದ ಧ್ವನಿ ಅಕ್ಕಪಕ್ಕದ ಪ್ರದೇಶಗಳಲ್ಲಿ ಕೂಡ ಕೇಳಿಸಿತ್ತು. ಘಟನೆಯ ತೀವ್ರತೆಯಿಂದ ಪೊಲೀಸ್ ಠಾಣೆಯ ಒಂದು ಭಾಗವು ಹಾನಿಗೊಳಗಾಗಿದೆ. ಗಾಯಗೊಂಡವರನ್ನು ತಕ್ಷಣ ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಪರಿಸ್ಥಿತಿ ಗಂಭೀರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ.

ಕೆಲ ದಿನಗಳ ಹಿಂದೆ ನೌಗಾಮ್ ಪ್ರದೇಶದ ಬನ್ಪೋರಾದಲ್ಲಿ ಗೋಡೆಗಳ ಮೇಲೆ ಬೆದರಿಕೆಯ ಪೋಸ್ಟರುಗಳು ಕಂಡುಬಂದ ನಂತರ ಪೊಲೀಸರು ವ್ಯಾಪಕ ತನಿಖೆ ನಡೆಸಿದ್ದರು. ಶ್ರೀನಗರ ಪೊಲೀಸರು ಅಕ್ಟೋಬರ್ 19ರಂದು ಪ್ರಕರಣ ದಾಖಲಿಸಿ ತನಿಖೆ ಆರಂಭಿಸಿದ್ದರು. ಈ ತನಿಖೆಯ ಭಾಗವಾಗಿ, ಫರಿದಾಬಾದ್‌ನಿಂದ ವಶಪಡಿಸಿಕೊಂಡ ಸ್ಫೋಟಕಗಳಲ್ಲಿ ಒಂದು ಭಾಗವನ್ನು ಮಾದರಿ ಪರೀಕ್ಷೆಗಾಗಿ ಪೊಲೀಸ್ ಠಾಣೆಗೆ ತರಲಾಗಿತ್ತು. ಉಳಿದ ಬೃಹತ್ ಭಾಗದ ಸ್ಫೋಟಕಗಳನ್ನು ಇನ್ನೊಂದು ಸುರಕ್ಷಿತ ಸ್ಥಳದಲ್ಲಿ ಇರಿಸಲಾಗಿತ್ತು.

ಸ್ಫೋಟದ ನಿಖರ ಕಾರಣ ಮತ್ತು ಸ್ಫೋಟಕಗಳು ಆಕಸ್ಮಿಕವಾಗಿ ಸಿಡಿದದ್ದು ಹೇಗೆ ಎಂಬುದನ್ನು ಕಂಡುಹಿಡಿಯಲು ತನಿಖೆ ಪ್ರಾರಂಭವಾಗಿದೆ. ಘಟನಾ ಸ್ಥಳಕ್ಕೆ ಜಮ್ಮು-ಕಾಶ್ಮೀರ ಪೊಲೀಸ್ ಮತ್ತು ಭದ್ರತಾದಳಗಳು ವೇಗವಾಗಿ ತಲುಪಿ ದೃಶ್ಯಾವಳಿ ಸಂಗ್ರಹ ಮತ್ತು ತನಿಖೆ ನಡೆಸಿವೆ. ಶ್ರೀನಗರದ ಉಪ ಆಯುಕ್ತ ಅಕ್ಷಯ್ ಲ್ಯಾಬ್ರೂ ಘಟನೆಯ ನಂತರ ಗಾಯಗೊಂಡವರನ್ನು ಆಸ್ಪತ್ರೆಯಲ್ಲಿ ಭೇಟಿಯಾಗಿ ಆರೋಗ್ಯ ವಿಚಾರಿಸಿದ್ದಾರೆ.

ಶ್ರೀನಗರದ ನೌಗಾಮ್ ಪೊಲೀಸ್ ಠಾಣೆ ಸ್ಫೋಟವು ದೆಹಲಿ ಸ್ಫೋಟದೊಂದಿಗೆ ನೇರವಾಗಿ ಸಂಬಂಧ ಹೊಂದಿದೆ. ಉಗ್ರರಿಂದ ವಶಪಡಿಸಿಕೊಂಡ ಸ್ಫೋಟಕಗಳು ಪೊಲೀಸ್ ಠಾಣೆಯಲ್ಲೇ ಸ್ಫೋಟಿಸಿದೆ. ಇನ್ನೂ ಸಾವನ್ನಪ್ಪಿರುವುದು ಭದ್ರತಾ ಪಡೆಗಳ ಅಧಿಕಾರಿಗಳು ಎಂಬುದು ತೀವ್ರ ಬೇಸರದ ಸಂಗತಿಯಾಗಿದೆ.

## ಬಂಟ್ವಾಳ ಮತ್ತು ಪಣಂಬೂರು ಸಿಗ್ನಲ್ ಬಳಿ ಭೀಕರ ರಸ್ತೆ ದುರಂತ



**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಬಿಸಿ ರೋಡ್ ಸರ್ಕಲ್ ಬಳಿ ಎನ್‌ಜಿ ವೃತ್ತದ ಫೂಟ್‌ಪಾತ್‌ಗೆ ಕಾರು ಡಿಕ್ಕಿ ಹೊಡೆದು ಭೀಕರ ಅಪಘಾತ ಸಂಭವಿಸಿದ್ದು, ಈ ದುರಂತದಲ್ಲಿ ಬೆಂಗಳೂರು ಮೂಲದ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಇದೇ ವೇಳೆ ಆರು ಜನರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಮಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಅಪಘಾತವು ಚಾಲಕನು ಅತೀ ವೇಗವಾಗಿ ಕಾರು ಚಾಲಯಿಸುತ್ತಿದ್ದ ಎಂದು ತಿಳಿದುಬಂದಿದೆ. ಸ್ಥಳಕ್ಕೆ ಭೇಟಿ ನೀಡಿದ ಬಂಟ್ವಾಳ ಟ್ರಾಫಿಕ್ ಪೊಲೀಸ್ ರಾಜೇಶ್, ಆರೋಪಿ ಕಾರು ಚಾಲಕನನ್ನು ವಶಪಡಿಸಿ ಕೊಂಡಿದ್ದೇವೆ ಎಂದು ತಿಳಿಸಿದ್ದಾರೆ.

ಸ್ಥಳೀಯರು ಈ ಪ್ರದೇಶದಲ್ಲಿ ಟ್ರಾಫಿಕ್ ಸಂಕೀರ್ಣತೆಯಿಂದಾಗಿ ಹೆಚ್ಚಿನ ಎಚ್ಚರಿಕೆ ಅಗತ್ಯ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬಿಸಿ ರೋಡ್ ಸರ್ಕಲ್ ಬಂಟ್ವಾಳದಲ್ಲಿ ಎನ್‌ಜಿ ವೃತ್ತದ ಬಳಿ ಫೂಟ್‌ಪಾತ್‌ನಲ್ಲಿ ನಡೆಯುತ್ತಿದ್ದ ಒಂದು ಕುಟುಂಬದ ಸದಸ್ಯರು ಈ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ

ಕಾರು ಚಾಲನೆಯಲ್ಲಿ ಇದ್ದ ಚಾಲಕನು ನಿಯಂತ್ರಣ ಕಳೆದುಕೊಂಡು ಕಾರನ್ನು ಫೂಟ್‌ಪಾತ್‌ನ ಕಡೆಗೆ ತಿರುಗಿಸಿದ್ದರಿಂದ ಈ ದುರಂತ ಸಂಭವಿಸಿದೆ. ಮೃತಪಟ್ಟವರು ಬೆಂಗಳೂರಿನ ಪೀಣ್ಯ ನಿವಾಸಿಗಳು ಎಂದು ತಿಳಿದುಬಂದಿದ್ದು, ಅವರಲ್ಲಿ ರಮ್ಯಾ (23, ಖಾಸಗಿ ಕಂಪನಿ ಉದ್ಯೋಗಿ), ರವಿ (64, ರಿಟೈರ್ಡ್ ಅಧಿಕಾರಿ) ಮತ್ತು ನಂಜಮ್ಮ (75, ಗೃಹಿಣಿ) ಸೇರಿದ್ದಾರೆ. ಈ ಕುಟುಂಬವು ಮಂಗಳೂರಿನಲ್ಲಿ ಸಂಬಂಧಿಕರನ್ನು ಭೇಟಿಯಾಗಲು ಬಂದಿತ್ತು. ಗಾಯಗೊಂಡವರಲ್ಲಿ ಕೀರ್ತಿ (25), ಸುಶೀಲಾ (50), ಬಿಂದು (22) ಮತ್ತು ಪ್ರಶಾಂತ್ (28) ಗಂಭೀರ ಸ್ಥಿತಿಯಲ್ಲಿದ್ದು, ಅವರಲ್ಲಿ ಕೆಲವರಿಗೆ ಶಸ್ತ್ರಚಿಕಿತ್ಸೆ ಅಗತ್ಯವಾಗಿದೆ. ಕಾರು ಚಾಲಕ ಸುಬ್ರಹ್ಮಣ್ಯ (35) ಮತ್ತು ಕಿರಣ್ (30, ಸಣ್ಣಪುಟ್ಟ ಗಾಯಗಳು) ಕೂಡ ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಮಂಗಳೂರಿನ ಕೆಎಂಸಿ ಆಸ್ಪತ್ರೆ ಮತ್ತು ವೆನ್‌ಲಾಕ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಪೊಲೀಸ್ ತನಿಖೆಯಲ್ಲಿ, ಚಾಲಕ ಸುಬ್ರಹ್ಮಣ್ಯನು ಎಐಒ ಪಿಕಪ್‌ನಲ್ಲಿ ಮಂಗಳೂರು-ಬೆಂಗಳೂರು ಮಾರ್ಗದಲ್ಲಿ ಸಾಗುತ್ತಿದ್ದಾಗ ಮದ್ಯಪಾನ ಮಾಡಿರುತ್ತಾನೆ. ವೇಗ ಹೆಚ್ಚಿಸಿ ನಿಯಂತ್ರಣ ಕಳೆದುಕೊಂಡಿದ್ದಾನೆ ಎಂದು ಬಹಿರಂಗಪಟ್ಟಿದ್ದಾರೆ. ಆತನ ರಕ್ತದ ಮಾದರಿ ಪರೀಕ್ಷೆಗೆ ಕಳುಹಿಸಲಾಗಿದ್ದು, ಐಪಿಸಿ ಸೆಕ್ಷನ್ 304A (ಅಪರೂಪದ ದುರ್ಘಟನೆಯಿಂದ ಮರಣ) ಮತ್ತು 337 (ಬೇಹುದ್ದ ಗಾಯ) ಅಡಿಯಲ್ಲಿ ಕೇಸ್ ನೋಂದಾಯಿಸಲಾಗಿದೆ. ಸ್ಥಳೀಯ ಟ್ರಾಫಿಕ್ ಪೊಲೀಸ್ ತಂಡವು ಸಿಸಿಟಿವಿ ದೃಶ್ಯಗಳನ್ನು ಸಂಗ್ರಹಿಸಿ, ಚಾಲಕನ ಹಿನ್ನೆಲೆಯ ಬಗ್ಗೆ ತನಿಖೆ ನಡೆಸುತ್ತಿದ್ದಾರೆ. ಈ ಪ್ರದೇಶದಲ್ಲಿ ಫ್ಲೈಓವರ್ ಕಾರ್ಯಗಳಿಂದಾಗಿ ಟ್ರಾಫಿಕ್ ಸಂಕೀರ್ಣತೆ ಹೆಚ್ಚಾಗಿದ್ದು, ಚಾಲಕರು ಎಚ್ಚರಿಕೆ ವಹಿಸಬೇಕು ಎಂದು ಬಂಟ್ವಾಳ ಪೊಲೀಸ್ ಸೂಪರಿಂಟೆಂಡೆಂಟ್ ಮಹೇಶ್ ದಾಸ್ ಹೇಳಿದ್ದಾರೆ.

ರವಿ ಅವರ ಮಗ ಪ್ರಶಾಂತ್ ಗಂಭೀರ ಗಾಯಗೊಂಡಿದ್ದು, ಕುಟುಂಬದ ಏಕೈಕ ಆದಾಯ ಮೂಲವಾಗಿದ್ದ ರವಿ ಕೂಡ ಸಾವನ್ನಪ್ಪಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾ ಆಡಳಿತವು ಮೃತ ಪತಿ ಪ್ರತಿಗೆ 5 ಲಕ್ಷ ರೂಪಾಯಿ ಮತ್ತು ಗಾಯಾಳುಗಳಿಗೆ 50 ಸಾವಿರ ರೂಪಾಯಿ ಪರಿಹಾರ ಘೋಷಿಸಿದ್ದು, ಚಾಲಕನ ವಿರುದ್ಧ ಕಟ್ಟುನಿಟ್ಟು ಕ್ರಮ ತೆಗೆದುಕೊಳ್ಳುವುದಾಗಿ ಭರವಸೆ ನೀಡಿದ್ದಾರೆ.

## ಲೈಫ್ ಲೈನ್ ಫೀಡ್ಸ್ ಕಂಪನಿ ಮೇಲೆ ಐಟಿ ದಾಳಿ



**ಚಿಕ್ಕಮಗಳೂರು:** ತೆರಿಗೆ ವಂಚನೆ ಆರೋಪದ ಮೇಲೆ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ಚಿಕ್ಕಮಗಳೂರಿನ ಲೈಫ್ ಲೈನ್ ಫೀಡ್ಸ್ (ಇಂಡಿಯಾ) ಪ್ರೈವೇಟ್ ಕಂಪನಿ ಮೇಲೆ ದಾಳಿ ಮಾಡಿದ್ದಾರೆ.

ಕಂಪನಿಯ ಮಾಲೀಕ ಕಿಶೋರ್ ಕುಮಾರ್ ಹೆಗ್ಡೆಯವರ ಮನೆ, ನಗರದ ರತ್ನಗಿರಿ ರಸ್ತೆಯಲ್ಲಿರುವ ಕಛೇರಿ ಸೇರಿದಂತೆ ಫಾರಂ ಹೌಸ್ ಮೇಲೆ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಕಂಪನಿ ಮಾಲೀಕರ ಸಮ್ಮುಖದಲ್ಲಿ ಅಧಿಕಾರಿಗಳು ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ. 12ಕ್ಕೂ ಹೆಚ್ಚು ವಾಹನಗಳಲ್ಲಿ ಬಂದ 40ಕ್ಕೂ ಹೆಚ್ಚು ಸಿಬ್ಬಂದಿ ದಾಳಿಯಲ್ಲಿ ಭಾಗಿಯಾಗಿದ್ದಾರೆ.

ಪೊಲೀಸ್ ಇಲಾಖೆಗೆ ಯಾವುದೇ ಮಾಹಿತಿ ನೀಡದೆ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಲೈಫ್ ಲೈನ್ ಫೀಡ್ಸ್ (ಇಂಡಿಯಾ) ಪ್ರೈವೇಟ್ ಕಂಪನಿ ದೇಶ-ವಿದೇಶಗಳಿಗೆ ಲೈಫ್ ಲೈನ್ ಫೀಡ್ಸ್ (ಇಂಡಿಯಾ) ಪ್ರೈವೇಟ್ ಕಂಪನಿ ಕೋಳಿ ರಫ್ತು ಮಾಡುತ್ತಿದೆ.

**ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:**
**9538786812 / 9880655634**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಹರಿಯಾಣ ಮೂಲದ ಮಹಿಳೆಯ ಶವ ಕೊಡಗಿನಲ್ಲಿ ಪತ್ತೆ



**ಕೊಡಗು:** ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ಕಾರಿನಲ್ಲಿ ಹರಿಯಾಣ ಮೂಲದ ಮಹಿಳೆಯ ಶವ ಪತ್ತೆಯಾಗಿರುವ ಘಟನೆ ಕೊಡಗು ಜಿಲ್ಲೆಯ ವಿರಾಜಪೇಟೆಯಲ್ಲಿ ನಡೆದಿದೆ.

ಘಟನೆ ಶುಕ್ರವಾರ ಮಧ್ಯರಾತ್ರಿ 2 ಗಂಟೆ ಸುಮಾರಿಗೆ ನಡೆದಿದೆ. ವಿರಾಜಪೇಟೆ ಸಮೀಪದ ಲಿಂಗದಪುರ ಅರಣ್ಯ ಪ್ರದೇಶದ ಚೆಕ್‌ಪೋಸ್ಟ್ ಬಳಿ ಬರುತ್ತಿದ್ದ ಕಾರಿನ ಚಲನವಲನ ನೋಡಿದ ಪೊಲೀಸ್ ಸಿಬ್ಬಂದಿ, ಅನುಮಾನಗೊಂಡು ತಪಾಸಣೆಗಾಗಿ ಕಾರನ್ನು ನಿಲ್ಲಿಸಲು ಸೂಚಿಸಿದರು. ಸೂಚನೆ ನೀಡುತ್ತಿದ್ದಂತೆ ಚಾಲಕ ಕಾರನ್ನು ಬೇರೆ ದಾರಿಗೆ ತಿರುಗಿಸಲು ಯತ್ನಿಸಿದ್ದ.. ತಕ್ಷಣ ಕಾರನ್ನು ತಡೆದು ಪರಿಶೀಲನೆ ನಡೆಸಿದಾಗ ಹಿಂಬದಿ ಸೀಟಿನಲ್ಲಿ ಮಲಗಿಸಿದಂತೆ ಇಟ್ಟಿದ್ದ ಮಹಿಳೆಯ ಶವ ಪತ್ತೆಯಾಗಿದೆ.

ಈ ಘಟನೆಯಿಂದ ಬೆಚ್ಚಿಬಿದ್ದ ಸಿಬ್ಬಂದಿ ತಕ್ಷಣವೆ ಸಿದ್ದಾಪುರ ಪೊಲೀಸ್ ಠಾಣೆಗೆ ಮಾಹಿತಿಯನ್ನು ನೀಡಿದರು. ಕೆಲವೇ ನಿಮಿಷಗಳಲ್ಲಿ ಸ್ಥಳಕ್ಕೆ ಚಕ್ರಪಾಣಿ ಪೊಲೀಸ್ ತಂಡ ಆಗಮಿಸಿ ಕಾರಿನಲ್ಲಿದ್ದ ಮೂವರು ವ್ಯಕ್ತಿಗಳನ್ನು ವಶಕ್ಕೆ ಪಡೆದು ವಿಚಾರಣೆ ಆರಂಭಿಸಿದರು. ಪೊಲೀಸ್ ವಶದಲ್ಲಿದ್ದವರು ಎಲ್ಲರೂ ಹರಿಯಾಣ ಮೂಲದವರಾಗಿದ್ದು, ಮೈಸೂರಿನ ಮೇಟಗಲ್ಲಿ ಪ್ರದೇಶದ ಬಾಡಿಗೆ ಮನೆಯಲ್ಲಿ ವಾಸವಾಗಿದ್ದರು ಎಂದು ತಿಳಿದುಬಂದಿದೆ.

ಪೊಲೀಸರ ಪ್ರಾಥಮಿಕ ವಿಚಾರಣೆಯಲ್ಲಿ ಮೃತ ಮಹಿಳೆಯ ಹೆಸರು ನಾನ್ನಿ ದೇವಿ ಎಂದು ಗುರುತಿಸಲಾಗಿದೆ. ಆಕೆಯ ಪತಿ ರಾಕೇಶ್ ಕುಮಾರ್, ಹಾಗೂ ಆತನಿಬ್ಬರು ಸ್ನೇಹಿತರು ವಿಕಾಸ್ ಮತ್ತು ಸತ್‌ವೀರ್ ಕಾರಿನಲ್ಲಿ ಇದ್ದರು. ನಾನ್ನಿ ದೇವಿ ಮೂರ್ಛೆ (ಎಪಿಲೆಪ್ಸಿ) ಸಮಸ್ಯೆಯಿಂದ ಬಳಲುತ್ತಿದ್ದು, ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು ಎಂದು ರಾಕೇಶ್ ಹೇಳಿದ್ದಾನೆ.

ಆರೋಪಿಗಳು ಮೈಸೂರಿನ ಮೇಟಗಳ್ಳಿಯಲ್ಲಿ ವಾಸವಾಗಿದ್ದ ಹರಿಯಾಣ ಮೂಲದ ರಾಕೇಶ್ ಕುಮಾರ್ ಮತ್ತು ಅವರ ಇಬ್ಬರು ಸ್ನೇಹಿತರು ವಿಕಾಸ್ ಮತ್ತು ಸತ್‌ವೀರ್. ರಾಕೇಶ್ ಕುಮಾರ್ ತನ್ನ ಪತ್ನಿ ನಾನ್ನಿ ದೇವಿಯವರೊಂದಿಗೆ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದ.

ರಾಕೇಶ್ ವಿಚಾರಣೆ ವೇಳೆ ಒಂದಿಷ್ಟು ಮಾಹಿತಿ ನೀಡಿದ್ದು, ಶುಕ್ರವಾರ ರಾತ್ರಿ ಮನೆಯಲ್ಲಿ ಯಾರೂ ಇಲ್ಲದ ವೇಳೆ ನಾನ್ನಿ ದೇವಿ ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಕೆಲಸದಿಂದ ಮನೆಗೆ ವಾಪಸ್ಸಾದ ಆತ ಪತ್ನಿಯ ಶವವನ್ನು ನೋಡಿ ಬೆಚ್ಚಿಬಿದ್ದಿದ್ದಾನೆ. ಗಾಬರಿಯಲ್ಲಿ ಸ್ನೇಹಿತರಾದ ವಿಕಾಸ್ ಮತ್ತು ಸತ್‌ವೀರ್ ಅವರಿಗೆ ಕರೆ ಮಾಡಿ ವಿಷಯ ತಿಳಿಸಿದ್ದಾನೆ. ಬಳಿಕ, ಮೂವರು ಸೇರಿ ಶವವನ್ನು ಮೈಸೂರಿನಲ್ಲೇ ಬಿಟ್ಟುಹೋಗುವುದು ಅಥವಾ ಪೋಲೀಸರಿಗೆ ಮಾಹಿತಿ ನೀಡುವುದರ ಬಗ್ಗೆ ಚರ್ಚಿಸಿದ್ದರು. ಆದರೆ ಆತಂಕದಿಂದ ಪತ್ನಿಯ ಶವವನ್ನು ಕಾರಿನಲ್ಲಿ ಇಟ್ಟು ಸಾಗಿಸಲು ನಿರ್ಧರಿಸಿದ್ದರು ಎನ್ನಲಾಗಿದೆ.

ಹೀಗೆ ಶವವನ್ನು ಸಾಗಿಸುತ್ತಿರುವಾಗ, ಲಿಂಗದಪುರ ಅರಣ್ಯ ಚೆಕ್‌ಪೋಸ್ಟ್‌ನಲ್ಲಿ ರಾತ್ರಿ 2ಗಂಟೆ ಸುಮಾರಿಗೆ ಅವರು ಸಿಕ್ಕಿ ಬಿದ್ದಿದ್ದಾರೆ. ಪೊಲೀಸರು ಈಗ ಮೈಸೂರಿನಲ್ಲಿರುವ ಘಟನಾ ಸ್ಥಳದ ಮೇಲ್ವಿಚಾರಣೆ ನಡೆಸುತ್ತಿದ್ದಾರೆ.

# ಲೈಂಗಿಕ ಕಿರುಕುಳ ಆರೋಪ – ಉದ್ಯಮಿ ಅರವಿಂದ್ ವೆಂಕಟೇಶ್ ರೆಡ್ಡಿ ಬಂಧನ



**ಬೆಂಗಳೂರು:** ಚಲನಚಿತ್ರ ನಟಿಗೆ ಲೈಂಗಿಕ ಕಿರುಕುಳ ನೀಡಿದ ಪ್ರಕರಣದಲ್ಲಿ ಉದ್ಯಮಿ ಹಾಗೂ ಕ್ರಿಕೆಟ್ ತಂಡ ಮಾಲೀಕರಾಗಿ ಪರಿಚಿತರಾಗಿರುವ ಅರವಿಂದ್ ವೆಂಕಟೇಶ್ ರೆಡ್ಡಿಯನ್ನು ಪೊಲೀಸರು dramatic ಆಗಿ ಬಂಧಿಸಿರುವ ಘಟನೆ ದೊಡ್ಡ ಚರ್ಚೆಗೆ ಕಾರಣವಾಗಿದೆ. ಹಲವು ದಿನಗಳಿಂದ ತಪ್ಪಿಸಿಕೊಳ್ಳುತ್ತಿದ್ದ ಆರೋಪಿಯನ್ನು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲೇ ವಶಕ್ಕೆ ಪಡೆಯಲಾಗಿದ್ದು, ಪ್ರಕರಣ ಮತ್ತೊಮ್ಮೆ ಚರ್ಚೆಗೆ ಬಂದಿದೆ.

ಮಾಹಿತಿಯ ಪ್ರಕಾರ, ಎವಿಆರ್ ಗ್ರೂಪ್ (AVR Group) ಮಾಲೀಕನಾಗಿರುವ ಅರವಿಂದ್ ರೆಡ್ಡಿ 2021ರಲ್ಲಿ ಪರಿಚಯವಾಗಿದ್ದ ಚಲನಚಿತ್ರ ನಟಿಗೆ ಲೈಂಗಿಕ ಕಿರುಕುಳ ನೀಡಿದ್ದಾನೆಂದು ಆರೋಪ ವ್ಯಕ್ತವಾಗಿತ್ತು. ಆ ಸಮಯದಲ್ಲಿ ನಟಿ ಆರ್‌ಆರ್ ನಗರ ಪೊಲೀಸ್ ಠಾಣೆಯಲ್ಲಿ ಅಧಿಕೃತ ದೂರು ನೀಡಿದ್ದರು. ದೂರು ದಾಖಲಾದ ನಂತರ ಅರವಿಂದ್ ಹಲವು ಬಾರಿ ವಿಚಾರಣೆಯಿಂದ ತಪ್ಪಿಸಿಕೊಂಡಿದ್ದನು ಮತ್ತು ತನಿಖಾ ಪ್ರಕ್ರಿಯೆಯಿಂದ ದೂರವಿರಲು ಪ್ರಯತ್ನಿಸಿದ್ದನು.

ಐದು ದಿನಗಳ ಹಿಂದೆ ಈ ಪ್ರಕರಣವನ್ನು RR ನಗರ ಠಾಣೆಯಿಂದ ಗೋವಿಂದರಾಜನಗರ ಪೊಲೀಸ್ ಠಾಣೆಗೆ ವರ್ಗಾವಣೆ ಮಾಡಲಾಗಿತ್ತು. ತನಿಖೆಯನ್ನು ವೇಗಗೊಳಿಸಲು ಎಸಿಪಿ ಚಂದನ್ ಮತ್ತು ಎಸಿಪಿ ಸುಬ್ರಹ್ಮಣಿ ನೇತೃತ್ವದಲ್ಲಿ ವಿಶೇಷ ತಂಡ ರಚಿಸಲಾಗಿತ್ತು. ಆರೋಪಿತನ ಬಂಧನಕ್ಕಾಗಿ ಪೊಲೀಸರು ಲುಕ್‌ಔಟ್ ನೋಟಿಸ್ ಜಾರಿಗೊಳಿಸಿದ್ದರು. ಅದೇ ಹಿನ್ನೆಲೆಯಲ್ಲಿ ಶ್ರೀಲಂಕಾದಿಂದ ಬೆಂಗಳೂರಿಗೆ ಬರುತ್ತಿದ್ದ ಅರವಿಂದ್‌ನ್ನು ಇಂದು ಬೆಳಗಿನ ಜಾವ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಧ್ವಜದಂತೆ ತಡೆದು ಬಂಧಿಸಲಾಯಿತು.

ಅರವಿಂದ್ ವೆಂಕಟೇಶ್ ರೆಡ್ಡಿ ರಿಯಲ್ ಎಸ್ಟೇಟ್ ಉದ್ಯಮಿ ಎಂಬುದರ ಜೊತೆಗೆ ಕ್ರೀಡಾ ಕ್ಷೇತ್ರ ಮತ್ತು ಸಿನೀ ವಲಯಗಳಲ್ಲೂ ಹೆಚ್ಚು ಪರಿಚಿತರಾಗಿದ್ದ. ಮಹಾರಾಜ ಬಳ್ಳಾರಿ ಟಸ್ಕರ್ಸ್ ಕ್ರಿಕೆಟ್ ತಂಡದ ಮಾಲೀಕರಾಗಿದ್ದ ಅವರು, ಕಿರಿಕ್ ಪಕ್ಷದಿಂದ ಬೃಹತ್ ಮಟ್ಟದ ಸಿನಿ-ಕ್ರಿಕೆಟ್ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದರು. ನಟ-ನಟಿಯರಿಗೆ ಮನರಂಜನೆ ಮತ್ತು ಫಿಟ್‌ನೆಸ್ ಚಟುವಟಿಕೆಗಾಗಿ ಹಲವು ಮ್ಯಾಚ್‌ಗಳನ್ನು ನಿರ್ಮಿಸಿದ್ದರೂ, ಈ ಪ್ರಕರಣ ಹೊರಬಂದ ನಂತರ ಅವರ ಬಗ್ಗೆ ಪ್ರಶ್ನೆಗಳು ಎದ್ದಿವೆ.

# ಕಿತ್ತೂರುರಾಣಿ ಚೆನ್ನಮ್ಮ ಕಿರು ಮೃಗಾಲಯದಲ್ಲಿ 28 ಕೃಷ್ಣಮೃಗಗಳ ಅಸಹಜ ಸಾವು

**ಬೆಳಗಾವಿ** :ಜಿಲ್ಲೆಯ ಭೂತರಾಮನಹಟ್ಟಿ ಬಳಿಯ ಕಿತ್ತೂರುರಾಣಿ ಚೆನ್ನಮ್ಮ ಕಿರು ಮೃಗಾಲಯದಲ್ಲಿ 28 ಕೃಷ್ಣಮೃಗಗಳು ಏಕಾಏಕಿ ನಿಗೂಢವಾಗಿ ಸಾವನ್ನಪ್ಪಿರುವ ಭೀತಿಯ ಘಟನೆ ನಡೆದಿದ್ದು, ಈ ದುರಂತವು ಅರಣ್ಯ ಇಲಾಖೆಯಲ್ಲಿ ಆತಂಕ ಹುಟ್ಟಿಸಿದೆ. ಮೊನ್ನೆ 8 ಜಿಂಕೆಗಳು ಮತ್ತು ಇಂದು ಬೆಳಿಗ್ಗೆ ಮತ್ತೆ 20 ಕೃಷ್ಣಮೃಗಗಳು ಸತ್ತಿವೆ. ಈ ಸಾವುಗಳು ವಿಷಪ್ರಾಶನದಿಂದಾಗಿ ಸಂಭವಿಸಿವೆಯೇ, ಫುಡ್ ಪಾಯ್ಜನಿಂಗ್‌ನಿಂದಾಗಿ ತಗುಲಿರುವ ಸಾಂಕ್ರಾಮಿಕ ಕಾಯಿಲೆಯೇ ಕಾರಣವೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಈ ಸಂಬಂಧ ಪ್ರಕರಣ ದಾಖಲಾಗಿದ್ದು, ಅರಣ್ಯ ಸಚಿವ ಈಶ್ವರ್ ಬಿ. ಖಂಡ್ರೆ ಅವರು ತೀವ್ರ ಆತಂಕ ವ್ಯಕ್ತಪಡಿಸಿ, ತಜ್ಞರ ಸಮಿತಿ ರಚಿಸಿ ತನಿಖೆ ನಡೆಸುವಂತೆ ಆದೇಶ ನೀಡಿದ್ದಾರೆ. ಪ್ರಾಥಮಿಕ ವರದಿಗಳ ಪ್ರಕಾರ, ಈ ಜಿಂಕೆಗಳು ಸಾಂಕ್ರಾಮಿಕ ಕಾಯಿಲೆಯಿಂದ ಮೃತಪಟ್ಟಿರುವ ಸಾಧ್ಯತೆಯಿದ್ದು, ಮೃಗಾಲಯದ ಇತರ ಪ್ರಾಣಿಗಳಿಗೆ ಸೋಂಕು ಹರಡದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದ್ದಾರೆ.



ಕಿತ್ತೂರುರಾಣಿ ಚೆನ್ನಮ್ಮ ಕಿರು ಮೃಗಾಲಯವು ಬೆಳಗಾವಿ ನಗರದಿಂದ ಸುಮಾರು 12 ಕಿ.ಮೀ. ದೂರದ ಭೂತರಾಮನಹಟ್ಟಿಯಲ್ಲಿ 31.68 ಹೆಕ್ಟೇರ್ ಪ್ರದೇಶದಲ್ಲಿ ನಿರ್ವಹಿಸಲ್ಪಡುತ್ತದೆ. 1989ರಲ್ಲಿ ಸ್ಥಾಪನೆಯಾದ ಈ ಮೃಗಾಲಯವು ಟೈಗರ್ ಸಫಾರಿ, ಲಯನ್, ಲೆಪಾರ್ಡ್, ಬೇರ್, ವೈಟ್ ಪೀಕಾಕ್‌ಗಳು ಸೇರಿದಂತೆ 50ಕ್ಕೂ ಹೆಚ್ಚು ಪ್ರಾಣಿಗಳನ್ನು ಹೊಂದಿದ್ದು, ಪ್ರವಾಸಿಗರಿಗೆ ಜೀವಿಶಾಸ್ತ್ರ ಜ್ಞಾನ ನೀಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಆದರೆ, ಕಳೆದ ಎರಡು ದಿನಗಳಲ್ಲಿ ಇಲ್ಲಿ 28 ಜಿಂಕೆಗಳು (ರಾಬರ್ ಮನ್ಕಿ ಮತ್ತು ಲ್ಯಾಂಗುರ್ ಸೀಸ್) ಅಸಹಜವಾಗಿ ಸತ್ತಿವೆ. ಮೊನ್ನೆ ಸಂಜೆ 8 ಜಿಂಕೆಗಳು ಚಂಚಲತೆ ಕಳೆದುಕೊಂಡು, ಉಬ್ಬರ, ಶ್ವಾಸಕಷ್ಟ ಮತ್ತು ರಕ್ತದೊರೆಯುವಂತಹ ಲಕ್ಷಣಗಳೊಂದಿಗೆ ಸತ್ತಿದ್ದರೆ, ಇಂದು ಬೆಳಿಗ್ಗೆ 20 ಜಿಂಕೆಗಳು ಒಂದೇ ರೀತಿಯ ಲಕ್ಷಣಗಳೊಂದಿಗೆ ನಿಗೂಢವಾಗಿ ಸತ್ತಿವೆ.

ಮೃಗಾಲಯದ ಸಿಬ್ಬಂದಿ ಹೇಳುವಂತೆ, ಜಿಂಕೆಗಳು ಆಹಾರ ಸಮಯದ ನಂತರ ತೀವ್ರ ಅಸ್ವಸ್ಥತೆಯನ್ನು ತೋರಿಸಿ ಸತ್ತಿವೆ. ಇದು ಮೊದಲ ಬಾರಿಗೆ ಇಂತಹ ದೊಡ್ಡ ಸಾವು. ನಾವು ಎಲ್ಲಾ ಕ್ರಮಗಳನ್ನು ಕೈಗೊಂಡಿದ್ದೇವೆ, ಆದರೆ ಕಾರಣ ಇನ್ನೂ ಅರಿಯಲು ಸಾಧ್ಯವಾಗಿಲ್ಲ ಎಂದು ಮೃಗಾಲಯದ ವೆಟ್‌ರಿನರಿ ಅಧಿಕಾರಿ ಡಾ. ರಾಜೇಶ್ ಹೇಳಿದ್ದಾರೆ. ಮೃಗಾಲಯಕ್ಕೆ ಭೇಟಿ ನೀಡುವುದನ್ನು ತಾತ್ಕಾಲಿಕವಾಗಿ ತಡೆಯಲಾಗಿದೆ. ಪ್ರಾಥಮಿಕ ಪೋಸ್ಟ್‌ಮಾರ್ಟಮ್ ವರದಿಯಲ್ಲಿ ಸಾಂಕ್ರಾಮಿಕ ಕಾಯಿಲೆಯ ಸಾಧ್ಯತೆ ತಿಳಿಸಲಾಗಿದ್ದು, ಬ್ಯಾಕ್ಟೀರಿಯಾ ಅಥವಾ ವೈರಸ್ ತಗುಲಿರುವ ಶಂಕೆ ವ್ಯಕ್ತವಾಗಿದೆ.

ಈ ಘಟನೆಯ ಬಗ್ಗೆ ಮಾಹಿತಿ ಪಡೆದ ಸಚಿವ ಈಶ್ವರ್ ಬಿ. ಖಂಡ್ರೆ, ತೀವ್ರ ಅಸಮಾಧಾನ ವ್ಯಕ್ತಪಡಿಸಿ, ಈ 28 ಜಿಂಕೆಗಳ ಸಾವು ಆತಂಕದ ವಿಷಯ. ಮೃಗಾಲಯಗಳಲ್ಲಿ ಪ್ರಾಣಿಗಳ ಸಾವುಗಳು ಸಂರಕ್ಷಣಾ ಜವಾಬ್ದಾರಿಯನ್ನು ಪ್ರಶ್ನಿಸುತ್ತವೆ ಎಂದು ಹೇಳಿದ್ದಾರೆ. ಅರಣ್ಯ ಇಲಾಖೆಯ ಮುಖ್ಯ ಅಧಿಕಾರಿಗಳಿಗೆ ತಕ್ಷಣದ ಸೂಚನೆ ನೀಡಿದ ಸಚಿವರು, ತಜ್ಞರ ಸಮಿತಿ ರಚಿಸಿ ತನಿಖೆ ನಡೆಸುವಂತೆ ಆದೇಶಿಸಿದ್ದಾರೆ. ಸಮಿತಿಯಲ್ಲಿ ಅರಣ್ಯ ಇಲಾಖೆಯ ಅಧಿಕಾರಿಗಳು, ಜೀವಿಶಾಸ್ತ್ರಜ್ಞರು ಮತ್ತು ಪಶು ಚಿಕಿತ್ಸಕರು ಇರಲಿದ್ದಾರೆ. ಸೇರಲಿದ್ದಾರೆ. ವಿಷಪ್ರಾಶನ, ಕಲುಷಿತ ಆಹಾರ ಅಥವಾ ನೀರಿನಿಂದ ಸೋಂಕು ಬಂದಿದೆಯೇ, ಬೆಕ್ಕು ಅಥವಾ ಇತರ ಸಾಕು ಪ್ರಾಣಿಗಳಿಂದ ಹರಡಿದೆಯೇ ಎಂಬುದನ್ನು ಕೂಲಂಕುಷವಾಗಿ ಪರಿಶೀಲಿಸಿ, 15 ದಿನಗಳಲ್ಲಿ ವರದಿ ಸಲ್ಲಿಸಿ ಎಂದು ಸೂಚಿಸಿದ್ದಾರೆ.

ಸಚಿವರು ಮೃಗಾಲಯದ ಇತರ ಪ್ರಾಣಿಗಳ ಸುರಕ್ಷತೆಗೆ ಆದ್ಯತೆ ನೀಡಿ, ಐಸೋಲೇಷನ್ ವಾರ್ಡ್‌ಗಳನ್ನು ತಯಾರಿಸಿ, ವ್ಯಾಕ್ಸಿನೇಷನ್ ಮತ್ತು ಆರೈಕೆ ಕ್ರಮಗಳನ್ನು ತ್ವರಿತವಾಗಿ ಜಾರಿಗೊಳಿಸುವಂತೆ ಆದೇಶಿಸಿದ್ದಾರೆ. ಸಿಬ್ಬಂದಿಯ ನಿರ್ಲಕ್ಷ್ಯವಿದ್ದರೆ ನಿಯಮಾನುಸಾರ ಶಿಕ್ಷೆಯನ್ನು ಖಚಿತಪಡಿಸುತ್ತೇವೆ. ಇಂತಹ ಘಟನೆಗಳು ಮರುಕಳಿಸದಂತೆ ರಾಜ್ಯಾದ್ಯಂತ ಮೃಗಾಲಯಗಳ ನಿರ್ವಹಣೆಯಲ್ಲಿ ಸುಧಾರಣೆ ತರಲಾಗುವುದು ಎಂದು ಖಂಡ್ರೆ ಅವರು ಒತ್ತಾಯಿಸಿದ್ದಾರೆ. ಈ ಕ್ರಮಗಳು ಇತರ ಮೃಗಾಲಯಗಳಿಗೂ ಮಾದರಿಯಾಗಲಿದ್ದು, ಸಂಕ್ರಮಣ ನಿಯಂತ್ರಣಕ್ಕೆ 5 ಕೋಟಿ ರೂಪಾಯಿ ವೆಚ್ಚಿಸುವ ಯೋಜನೆಯನ್ನು ಘೋಷಿಸಿದ್ದಾರೆ.

ಈ ಕಿರು ಮೃಗಾಲಯವು 2025ರಲ್ಲಿ 2.6 ಕೋಟಿ ರೂಪಾಯಿ ವೆಚ್ಚದಲ್ಲಿ ಅಪ್‌ಗ್ರೇಡ್ ಆಗಿದ್ದು, ರೆಪ್ಟೈಲ್ ಪಾರ್ಕ್, ಕ್ರೊಕೊಡೈಲ್ ಎನ್‌ಕ್ಲೋಝರ್ ಮತ್ತು ಟೈಗರ್ ಸಫಾರಿ ಸೌಲಭ್ಯಗಳೊಂದಿಗೆ ಪ್ರವಾಸೋದ್ಯಮಕ್ಕೆ ಬೂಸ್ಟ್ ನೀಡುತ್ತದೆ. ಆದರೆ, ಸೀಮಿತ ಬಜೆಟ್, ಸಿಬ್ಬಂದಿ ಕೊರತೆ ಮತ್ತು ನೀರಿನ ಮೂಲಗಳ ಕಲುಷಿತ ಸ್ಥಿತಿಯಿಂದ ನಿರ್ವಹಣೆಯಲ್ಲಿ ತೊಂದರೆಗಳಿವೆ. ಸ್ಥಳೀಯ ಸಿಬ್ಬಂದಿ ಆಹಾರದ ಗುಣಮಟ್ಟ ಪರಿಶೀಲನೆಯಲ್ಲಿ ದೋಷಗಳು ಉಂಟಾಗಿರಬಹುದು ಎಂದು ಹೇಳಿದ್ದಾರೆ.

# ಕುಂದಾನಗರಿಯಲ್ಲಿ ಕುಳಿತು ಅಮೆರಿಕದ ನಾಗರಿಕರನ್ನ ವಂಚಿಸುತ್ತಿದ್ದ ಗ್ಯಾಂಗ್; 33 ಸೈಬರ್ ವಂಚಕರು ಅರೆಸ್ಟ್

**ಬೆಳಗಾವಿ:** ತಂತ್ರಜ್ಞಾನ ಬೆಳೆದಂತೆ ಆನ್‌ಲೈನ್ ವಹಿವಾಟು ಹೆಚ್ಚಾಗುತ್ತಲೇ ಇದೆ. ಇದನ್ನೆ ಬಂಡವಾಳ ಮಾಡಿಕೊಂಡಿರುವ ವಂಚಕರು ನೇರವಾಗಿ ಬ್ಯಾಂಕ್ ಖಾತೆಗೆ (Bank Account) ಕನ್ನ ಇಡಲು ಶುರು ಮಾಡಿದ್ದಾರೆ. ಸಾಮಾನ್ಯವಾಗಿ ಕರ್ನಾಟಕದಲ್ಲಿ ಎಲ್ಲೇ ಸೈಬರ್ ವಂಚನೆ ನಡೆದರೂ, ಅದರ ಹಿಂದೆ ವಿದೇಶಿಗರ ಲಿಂಕ್ ಇರುತ್ತಿತ್ತು. ಆದ್ರೆ ಈಗ ಕುಂದಾನಗರಿಯಲ್ಲಿ ನಡೆದಿರೋದೇ ಬೇರೆ. ಬೆಳಗಾವಿಯಲ್ಲಿ (Belaga-vi) ಕುಳಿತು ವಿಶ್ವದ ದೊಡ್ಡಣ್ಣ ಎನ್ನುವ ಅಮೆರಿಕದ ನಾಯಕರಿಗೇ ಚಳ್ಳೆಹಣ್ಣು ತಿನ್ನಿಸಿದ್ದಾರೆ.

ಹೌದು. ಕಾಲ್ ಸೆಂಟರ್ (Call Center) ಹೆಸರಿನಲ್ಲಿ ಅನುಮತಿ ಪಡೆದು ವಂಚಿಸುತ್ತಿದ್ದ ಸೈಬರ್ ವಂಚಕರನ್ನ ಬೆಳಗಾವಿ ಪೊಲೀಸರು ಬಂಧಿಸಿ, ಜೈಲಿಗಟ್ಟಿದ್ದಾರೆ. ಮೂರು ದಿನಗಳ ತಪಾಸಣೆ ಬಳಿಕ ವಂಚನೆ ಜಾಲ ಬೆಳಕಿಗೆ ಬಂದಿದೆ. ವಂಚಕರ ಬಗ್ಗೆ ತಿಳಿದು ಪೊಲೀಸರೇ ದಂಗಾಗಿದ್ದಾರೆ.



ಪೊಲೀಸರ ತಪಾಸಣೆ ಬಳಿಕ ಉತ್ತರ ಭಾರತ ಮೂಲದ 33 ಮಂದಿ ಆರೋಪಿಗಳನ್ನ ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಬಂಧಿತರಿಂದ 37 ಲ್ಯಾಪ್ ಟಾಪ್, 37 ಮೊಬೈಲ್‌ಗಳ ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಗಳು ಬೆಳಗಾವಿಯ ಅಜಮ್ ನಗರದ ಕುಮಾರ್ ಹಾಲ್‌ನಲ್ಲಿ ಬಾಡಿಗೆ ಮನೆ ಪಡೆದು ದಂಧೆ ನಡೆಸುತ್ತಿದ್ದರು ಎನ್ನಲಾಗಿದೆ. ಕಾಲ್ ಸೆಂಟರ್ ಹೆಸರಿನಲ್ಲಿ ದಂಧೆ ಶುರು ಮಾಡಿದ್ದರು. ಪ್ರತಿದಿನ ನೂರಾರು ಜನರಿಗೆ ಕರೆ ಮಾಡಿ ಯಾಮಾರಿಸುತ್ತಿದ್ದರು. ಬಳಿಕ ಅಮೆರಿಕದ ಹಿರಿಯ ನಾಗರಿಕರನ್ನ ಟಾರ್ಗೆಟ್ ಮಾಡಿದ್ದರು. ಡಾರ್ಕ್ ವೆಬ್‌ನಲ್ಲಿ ನಂಬರ್ ತೆಗೆದು ಕರೆ ಮಾಡುತ್ತಿದ್ದರು. ನಿಮ್ಮ ಹೆಸರಿನಲ್ಲಿ ಪಾರ್ಸಲ್ ಬಂದಿದೆ ಎಂದು ಹೇಳುತ್ತಿದ್ದರು. ಪಾರ್ಸೆಲ್ ಬಂದಿಲ್ಲ ಅಂತ ಗ್ರಾಹಕರು ಪ್ರತಿಕ್ರಿಯಿಸಿದ್ರೆ, ಅದನ್ನ ಕ್ಯಾನ್ಸಲ್ ಮಾಡಿ ಅಂತ ಬೇರೆ ನಂಬರ್ ಕೊಡ್ತಿದ್ದರು. ಆ ನಂಬರ್‌ಗೆ ಕರೆ ಮಾಡಿದಾಗ ಯಾಮಾರಿಸಿ ಹಣ ಎಗರಿಸುತ್ತಿದ್ದರು. ಫೆಡರಲ್ ಟ್ರೆಡ್ ಕಮಿಷನರ್ ಅಂತಾ ಹೆಸರು ಹೇಳಿ ವಂಚನೆ ವಂಚನೆ ಮಾಡುತ್ತಿದ್ದರು. ಇದೇ ರೀತಿ ಒಬ್ಬೊಬ್ಬರಿಗೆ ಒಂದೊಂದು ಕಥೆ ಹೇಳಿ ವಂಚಿಸುತ್ತಿದ್ದರು.

ಸದ್ಯ ಈ ಪ್ರಕರಣಕ್ಕೆ ಸಂಬಂಧಿಸಿ ಬೆಳಗಾವಿ ಸೈಬರ್ ಪೊಲೀಸರು ಒಟ್ಟು 33 ಜನ ಆರೋಪಿಗಳನ್ನ ಬಂಧಿಸಿ ಜೈಲಿಗಟ್ಟಿದ್ದಾರೆ. ಬೆಳಗಾವಿ ಸೈಬರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವಿದೇಶಕ್ಕೆ ಪರಾರಿಯಾಗಲು ಪಾಸ್‌ಪೋರ್ಟ್‌ಗೆ ಅರ್ಜಿ ಹಾಕಿದ್ದ ಶಾಹಿನ



**ನವದೆಹಲಿ:**ಉಗ್ರ ಚಟುವಟಿಕೆಯಲ್ಲಿ ಭಾಗಿಯಾದ ಆರೋಪದಲ್ಲಿ ಬಂಧನಕ್ಕೊಳಗಾಗಿರುವ ವೈದ್ಯೆ ಶಾಹಿನ ಸಯೀದ್ ವಿದೇಶಕ್ಕೆ ಪರಾರಿಯಾಗಲು ಪಾಸ್‌ಪೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಳು. ಆಕೆಯ ಪಾಸ್‌ಪೋರ್ಟ್‌ಗಾಗಿ ಪೊಲೀಸರು ಪರಿಶೀಲನೆಯನ್ನೂ ನಡೆಸಿದ್ದರು ಎಂದು ಮೂಲಗಳು ತಿಳಿಸಿವೆ.

ಫರಿದಾಬಾದ್‌ನ ಅಲ್-ಫಲಾಹ್ ವಿಶ್ವವಿದ್ಯಾಲಯದಲ್ಲಿ ಹಿರಿಯ ವೈದ್ಯೆಯಾಗಿ ಕೆಲಸ ಮಾಡುತ್ತಿದ್ದ ಶಾಹಿನ ಕಾರಿನಲ್ಲಿ ಅಸಾಲ್ಟ್ ರೈಫಲ್‌ಗಳು ಮತ್ತು ಇತರ ಮದ್ದುಗುಂಡುಗಳು ಪತ್ತೆಯಾಗಿದ್ದವು. ಇದರ ಬೆನ್ನಲ್ಲೇ ಆಕೆಯನ್ನು ಬಂಧಿಸಲಾಗಿತ್ತು. ನವೆಂಬರ್ 10 ರಂದು ಕೆಂಪು ಕೋಟೆಯ ಬಳಿ ಐ20 ಕಾರು ಸ್ಫೋಟ (Delhi Blast) ಪ್ರಕರಣದಲ್ಲಿ ಶಾಹಿನ ಕೈವಾಡದ ಬಗ್ಗೆ ತನಿಖೆ ನಡೆಯುತ್ತಿದೆ.

ದೆಹಲಿಯಲ್ಲಿ ಕಾರು ಸ್ಫೋಟದಲ್ಲಿ ಭಾಗಿಯಾಗಿದ್ದ ಶಂಕಿತ ಉಮರ್ (Doctor Umar), ಶಾಹೀನ ಮತ್ತು ಮುಜಮ್ಮಿಲ್ ಫರಿದಾಬಾದ್‌ನ ಅಲ್-ಫಲಾಹ್ ವಿಶ್ವವಿದ್ಯಾಲಯದಲ್ಲಿ ಕೆಲಸ ಮಾಡುತ್ತಿದ್ದರು. ಶಾಹೀನ ಮತ್ತು ಮುಜಮ್ಮಿಲ್ ಬಂಧನದ ಬಳಿಕ ನ.10ರಂದು ಉಮರ್ ಕೆಂಪು ಕೋಟೆಯ ಬಳಿ ಕಾರು ಸ್ಫೋಟಿಸಿದ್ದ. ಈ ಘಟನೆಯಲ್ಲಿ 13 ಜನರು ಸಾವನ್ನಪ್ಪಿ, 20 ಜನರು ಗಾಯಗೊಂಡಿದ್ದರು.

ದೆಹಲಿ ಬಳಿ ಶಂಕಿತರು ಬಾಡಿಗೆಗೆ ಪಡೆದ ಮನೆಯಲ್ಲಿ 3,000 ಕೆಜಿ ಸ್ಫೋಟಕ ಮತ್ತು ಬಾಂಬ್ ತಯಾರಿಸುವ ಸಾಮಗ್ರಿಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದರು. ಇನ್ನೂ ಅಲ್ ಫಲಾಹ್ ವಿಶ್ವವಿದ್ಯಾಲಯದ ಮುಜಮ್ಮಿಲ್ ಕೋಣೆಯಲ್ಲಿ ರಹಸ್ಯ ಸಭೆ ನಡೆಸಿ ದೆಹಲಿಯಲ್ಲಿ ಸ್ಫೋಟ ನಡೆಸುವ ಯೋಜನೆ ರೂಪಿಸುತ್ತಿದ್ದರು.

ಶಾಹಿನಗೆ ಜಮಾತ್-ಉಲ್-ಮೊಮಿನಾತ್‌ನ ಮಹಿಳಾ ವಿಭಾಗವನ್ನು ಭಾರತದಲ್ಲಿ ಸ್ಥಾಪಿಸುವ ಮತ್ತು ಭಯೋತ್ಪಾದಕ ಚಟುವಟಿಕೆಗಳಿಗೆ ಮಹಿಳೆಯರನ್ನು ನೇಮಿಸುವ ಕೆಲಸವನ್ನು ವಹಿಸಲಾಗಿತ್ತು ಎಂದು ತನಿಖೆಯಿಂದ ತಿಳಿದು ಬಂದಿದೆ. ಇನ್ನೂ ರಾಷ್ಟ್ರೀಯ ವೈದ್ಯಕೀಯ ಆಯೋಗವು ಶಾಹಿನ ನೋಂದಣಿಯನ್ನು ರದ್ದುಗೊಳಿಸಿದೆ.

ಲಕ್ನೋ ಮೂಲದ ಶಾಹೀನ ಸಯೀದ್, ಅಲ್-ಫಲಾಹ್ ವಿಶ್ವವಿದ್ಯಾಲಯಕ್ಕೆ ಸೇರುವ ಮೊದಲು ಹಲವಾರು ವೈದ್ಯಕೀಯ ಕಾಲೇಜುಗಳಲ್ಲಿ ಕೆಲಸ ಮಾಡಿದ್ದಳು. ಇದುವರೆಗಿನ ತನಿಖೆಯ ಪ್ರಕಾರ, ಸೆಪ್ಟೆಂಬರ್ 2012 ರಿಂದ ಡಿಸೆಂಬರ್ 2013 ರವರೆಗೆ ಕಾನ್ಪುರದ ವೈದ್ಯಕೀಯ ಕಾಲೇಜಿನಲ್ಲಿ ಔಷಧಶಾಸ್ತ್ರ ವಿಭಾಗದ ಮುಖ್ಯಸ್ಥಳಾಗಿದ್ದಳು ಎಂದು ತಿಳಿದು ಬಂದಿದೆ.

# ನೇಣಿಗೆ ಶರಣಾದ ಪದವಿ ವಿದ್ಯಾರ್ಥಿನಿ



**ಶಿವಮೊಗ್ಗ:** ತೀರ್ಥಹಳ್ಳಿ ತಾಲೂಕಿನ ಬೆಜ್ಜವಳ್ಳಿ ಗ್ರಾಮ ಸಮೀಪದ ಬಚ್ಚನಕೂಡಿಗೆಯಲ್ಲಿ ಯುವತಿಯೊಬ್ಬಳು ಆತ್ಮಹತ್ಯೆ ಮಾಡಿಕೊಂಡಿರುವ ದುರ್ಘಟನೆ ಸ್ಥಳೀಯರನ್ನು ತೀವ್ರ ದುಃಖ ಮತ್ತು ಅಚ್ಚರಿಗೀಡಾಗಿಸಿದೆ. ಮನೆಯ ಸಮೀಪದಲ್ಲೇ ಇರುವ ಮರಕ್ಕೆ ನೇಣು ಬಿಗಿದುಕೊಂಡು ಪ್ರಾಣ ಬಿಟ್ಟಿರುವ ಈ ಘಟನೆ ಇಂದು ಬೆಳಕಿಗೆ ಬಂದು ಗ್ರಾಮದಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದೆ. ಯುವತಿಯ ಅಕಾಲಿಕ ಮತ್ತು ಅಪ್ರತೀಕ್ಷಿತ ಸಾವಿನ ವಿಚಾರ ಕೇಳಿದಂತೆಯೇ ನೆರೆಹೊರೆಯವರು, ಬಂಧುಮಿತ್ರರು ಸ್ಥಳಕ್ಕೆ ಧಾವಿಸಿದ್ದು, ಎಲ್ಲರೂ ಆಕೆಯ ನಿರ್ಧಾರಕ್ಕೆ ಕಾರಣವೇನು ಎಂಬ ಪ್ರಶ್ನೆಯಲ್ಲಿ ಆಘಾತಗೊಂಡಿದ್ದಾರೆ.

ಮಾಹಿತಿಯ ಪ್ರಕಾರ, ಬಚ್ಚನಕುಡಿಗೆಯ ರಮೇಶ್ ಆಚಾರ್ ಅವರ ಪುತ್ರಿ ಪ್ರಾಪ್ತಿ (21) ಆತ್ಮಹತ್ಯೆಗೆ ಶರಣಾಗಿರುವ ಯುವತಿಯಾಗಿದ್ದು, ತನ್ನ ವಿದ್ಯಾಭ್ಯಾಸದಲ್ಲಿ ತುಂಬಾ ಚುರುಕುಳಾಗಿದ್ದಳು. ತೀರ್ಥಹಳ್ಳಿಯ ಬಾಳೆಬಯಲು ಸರ್ಕಾರಿ ಪದವಿ ಕಾಲೇಜಿನಲ್ಲಿ ತೃತೀಯ ವರ್ಷದ ಬಿಬಿಎ ಪದವಿ ವ್ಯಾಸಂಗ ಮಾಡುತ್ತಿದ್ದ ಆಕೆ ಮನೆಯಲ್ಲಿ ಎಲ್ಲರೊಂದಿಗೆ ಸಾಮಾನ್ಯವಾಗಿ, ಸಂತೋಷದಿಂದಲೇ ವರ್ತಿಸುತ್ತಿದ್ದಳು ಎಂಬುದು ಕುಟುಂಬದವರ ಹೇಳಿಕೆ. ಯಾವುದೇ ರೀತಿಯ ಗಂಭೀರ ಸಮಸ್ಯೆಯ ಲಕ್ಷಣಗಳನ್ನು ತೋರಿಸದೇ ಇದ್ದ ಆಕೆ ಏಕಾಏಕಿ ಜೀವ ತೆತ್ತಿರುವುದು ಕುಟುಂಬಸ್ಥರನ್ನು ಮಾತ್ರವಲ್ಲ, ಗ್ರಾಮಸ್ಥರನ್ನೂ ಬೆಚ್ಚಿಬೀಳುವಂತೆ ಮಾಡಿದೆ.

ಪ್ರಾಪ್ತಿ ಆತ್ಮಹತ್ಯೆ ಮಾಡಿಕೊಳ್ಳಲು ನಿಜವಾದ ಕಾರಣವೇನು ಎನ್ನುವುದು ಇನ್ನೂ ಸ್ಪಷ್ಟವಾಗಿಲ್ಲ. ಆಕೆಯ ವೈಯಕ್ತಿಕ ಜೀವನದಲ್ಲಿ ಯಾವುದಾದರೂ ಒತ್ತಡವಿತ್ತೇ? ವಿದ್ಯಾಭ್ಯಾಸ, ಸ್ನೇಹ ಸಂಬಂಧ, ಆರೋಗ್ಯ ಅಥವಾ ಬೇರೆ ಯಾವುದಾದರೂ ಕಾರಣದಿಂದ ಆಕೆಗೆ ಮಾನಸಿಕ ಒತ್ತಡ ಎದುರಾಯಿತೇ? ಎಂಬುದರ ಕುರಿತು ಈಗ ತನಿಖೆ ನಡೆಯುತ್ತಿದೆ. ಈ ಕುರಿತು ಯಾವುದೇ ಪತ್ರ ಅಥವಾ ಸುಳಿವು ದೊರೆತಿಲ್ಲದಿರುವುದರಿಂದ, ಘಟನೆ ಇನ್ನಷ್ಟು ಸವಾಲಿನ ರೂಪ ಪಡೆದುಕೊಂಡಿದೆ.

ಘಟನಾ ಸ್ಥಳಕ್ಕೆ ಭೇಟಿ ನೀಡಿದ ಮಾಳೂರು ಪೊಲೀಸರು ಪ್ರಾಥಮಿಕ ಪರಿಶೀಲನೆ ನಡೆಸಿ, ಪ್ರಕರಣ ದಾಖಲಿಸಿಕೊಂಡಿದ್ದಾರೆ. ಸಂತ್ರಸ್ತೆಯ ಮೊಬೈಲ್ ಫೋನ್, ಆಕೆಯ ನೋಟ್‌ಬುಕ್‌ಗಳು, ವೈಯಕ್ತಿಕ ವಸ್ತುಗಳು ಸೇರಿದಂತೆ ಅಗತ್ಯವಾದ ಸಾಕ್ಷ್ಯಗಳನ್ನು ಪೊಲೀಸರು ಸಂಗ್ರಹಿಸಿದ್ದಾರೆ. ತಾಂತ್ರಿಕ ವಿಶ್ಲೇಷಣೆ ಮತ್ತು ಡಿಜಿಟಲ್ ಸಾಕ್ಷ್ಯಗಳ ಮೂಲಕ ಆಕೆ ಕೊನೆಯಾಗಿ ಯಾರೊಂದಿಗೆ ಸಂಪರ್ಕದಲ್ಲಿದ್ದಳು, ಯಾವುದೇ ರೀತಿಯ ಆತಂಕಕಾರಿ ಸಂದೇಶಗಳು ಅಥವಾ ಕರೆ ದಾಖಲೆಗಳಿವೆಯೇ ಎಂಬುದನ್ನು ಪರಿಶೀಲಿಸಲಾಗುತ್ತಿದೆ.

ಈ ನಡುವೆ, ಪೋಸ್ಟ್‌ಮಾರ್ಟಮ್ ವರದಿ ಮಹತ್ವದ ಪಾತ್ರವಹಿಸುವ ನಿರೀಕ್ಷೆಯಿದ್ದು, ಆಕೆಯ ಸಾವಿನ ನಿಖರ ಸಮಯ, ಕಾರಣ ಮತ್ತು ಯಾವುದೇ ಹೊರಗಿನ ಕಾರಣಗಳ ಸಾಧ್ಯತೆ ಬಗ್ಗೆ ಸ್ಪಷ್ಟನೆ ನೀಡಲಿದೆ. ಕುಟುಂಬ ಸದಸ್ಯರ ಹೇಳಿಕೆಗಳನ್ನು ಕೂಡ ಪೊಲೀಸರು ದಾಖಲಿಸಿಕೊಂಡಿದ್ದು, ಅವರು ಯಾವುದೇ ಅನುಮಾನಕಾರಿ ವಿಷಯಗಳನ್ನು ಗಮನಿಸಿದ್ದಾರೆಯೇ ಎಂಬುದನ್ನು ವಿವರವಾಗಿ ಪರಿಶೀಲಿಸಲಾಗುತ್ತಿದೆ.

# ರಜನಿಕಾಂತ್ ಜೊತೆ ತೆರೆ ಹಂಚಿಕೊಳ್ಳಲು ಮೇಘನಾ ರಾಜ್ ರೆಡಿ



ನಟಿ ಮೇಘನಾ ರಾಜ್ (Meghana Raj) ಅವರು ಸಿನಿಮಾ ಆಯ್ಕೆಯಲ್ಲಿ ಚ್ಯೂಸಿ ಆಗಿದ್ದಾರೆ. ಪತಿ ಚಿರಂಜೀವಿ ಸರ್ಜಾ ನಿಧನದ ನಂತರ ಅವರ ಜೀವನದಲ್ಲಿ ಸಾಕಷ್ಟು ಏರಿಳಿತಗಳು ಉಂಟಾದವು. ಅದೆಲ್ಲವನ್ನೂ ಮೆಟ್ಟಿ ನಿಂತಿದ್ದಾರೆ. ಈಗ ಮಗ ರಾಯನ್ ಅವರ ಬದುಕನ್ನು ಮತ್ತೆ ಕಲರ್‌ಫುಲ್ ಮಾಡಿದ್ದಾನೆ. ಈಗ ಮೇಘನಾ ರಾಜ್ ಅವರು ತಮಿಳು ಚಿತ್ರರಂಗಕ್ಕೆ ಕಂಬ್ಯಾಕ್ ಮಾಡಲು ರೆಡಿ ಆಗಿದ್ದಾರೆ. ಸುಮಾರು 13 ವರ್ಷಗಳ ಬಳಿಕ ಅವರು ತಮಿಳು ರಂಗದಲ್ಲಿ ಬಣ್ಣ ಹಚ್ಚುತ್ತಿದ್ದಾರೆ ಎನ್ನಲಾಗಿದೆ. ಅದು ಕೂಡ ರಜನಿಕಾಂತ್ ನಟನೆಯ 'ಜೈಲರ್ 2' ಸಿನಿಮಾ ಮೂಲಕ.

ಮೇಘನಾ ರಾಜ್ ಅವರು ಕನ್ನಡದ ಜೊತೆಗೆ ತಮಿಳು, ಮಲಯಾಳಂ ಹಾಗೂ ತೆಲುಗು ಭಾಷೆಯಲ್ಲೂ ನಟಿಸಿ ಗಮನ ಸೆಳೆದಿದ್ದಾರೆ. ಅವರು ಇತ್ತೀಚೆಗೆ ಸಿನಿಮಾ ಆಯ್ಕೆಯಲ್ಲಿ ಚ್ಯೂಸಿ ಆಗಿದ್ದಾರೆ. 2023ರಲ್ಲಿ ರಿಲೀಸ್ ಆದ 'ತತ್ಸಮ ತದ್ಭವ' ಸಿನಿಮಾದಲ್ಲಿ ಮೇಘನಾ ನಟಿಸಿದ್ದರು. ಇದಾದ ಬಳಿಕ ಅವರ ನಟನೆಯ ಯಾವುದೇ ಸಿನಿಮಾ ರಿಲೀಸ್ ಆಗಿಲ್ಲ. ಈಗ ಅವರು ರಜನಿಕಾಂತ್ ಜೊತೆ ತೆರೆ ಹಂಚಿಕೊಳ್ಳಲಿದ್ದಾರಂತೆ.



2023ರಲ್ಲಿ ರಿಲೀಸ್ ಆದ 'ಜೈಲರ್' ಸಿನಿಮಾ ಸೂಪರ್ ಹಿಟ್ ಆಯಿತು. ಈ ಚಿತ್ರದ ಸೀಕ್ವೆಲ್ ಆಗಿ 'ಜೈಲರ್ 2' ಸಿನಿಮಾ ಸಿದ್ಧವಾಗುತ್ತಿದೆ. ಈ ಚಿತ್ರಕ್ಕೆ ಈಗಾಗಲೇ ಶೂಟಿಂಗ್ ಕೂಡ ಭರದಿಂದ ಸಾಗುತ್ತಿದೆ. ಈ ಸಿನಿಮಾದಲ್ಲಿ ನಟಿಸಲು ಮೇಘನಾಗೆ ನಿರ್ದೇಶಕ ನೆಲ್ಸನ್ ದಿಲೀಪ್ ಕುಮಾರ್ ಅವರು ಪ್ರಮುಖ ಪಾತ್ರ ಆಫರ್ ಮಾಡಿದ್ದಾರಂತೆ.

ಮೇಘನಾಗೆ ತಮಿಳು ಚಿತ್ರರಂಗ ಹೊಸದೇನು ಅಲ್ಲ. ಈ ಮೊದಲು 'ಕಾದಲ್ ಸೊನ್ನ ವಂದೇನ್' 'ಉಯರದಿರು 420', 'ನಂದ ನಂದಿತ' ಹೆಸರಿನ ತಮಿಳು ಸಿನಿಮಾದಲ್ಲಿ ನಟಿಸಿದ್ದರು. 2012ರಿಂದ ಈಚೆಗೆ ಅವರು ಯಾವುದೇ ತಮಿಳು ಸಿನಿಮಾದಲ್ಲಿ ನಟಿಸಿರಲಿಲ್ಲ. ಈಗ ತಮಿಳು ಸಿನಿಮಾ ಆಫರ್ ಅವರನ್ನು ಮತ್ತೆ ಹುಡುಕಿ ಬಂದಿದೆ ಎನ್ನಲಾಗುತ್ತಿದೆ.

ಇತ್ತೀಚೆಗೆ 'ಕೂಲಿ' ಸಿನಿಮಾದಲ್ಲಿ ಕನ್ನಡದ ರಚಿತಾ ರಾಮ್ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದರು. ಈಗ 'ಜೈಲರ್ 2' ಚಿತ್ರದಲ್ಲಿ ನಟಿಸೋಕೆ ಕನ್ನಡದ ಮತ್ತೊರ್ವ ನಟಿಗೆ ಅವಕಾಶ ಸಿಕ್ಕಂತೆ ಆಗಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.